# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ

ರಾಜ್ಯ ಕೇಂದ್ರ ಕಾರ್ಯಾಲಯ, #39, ಶಾಂತಿಗೃಹ, ಅರಮನೆ ರಸ್ತೆ, ಬೆಂಗಳೂರು – 560 001

ದೂ:+91-80-2226 0017;+91-80-2226 7470;+91-80-2226 1047 ಮಿಂಚಂಚೆ: info@bsgkarnataka.org ಅಂತರ್ಜಾಲ: www.bsgkarnataka.org


ಸಂಖ್ಯೆ:SHQ/Special Summer Camp/143/2025-26/2437 ದಿನಾಂಕ:12.03.2026

ಎಲ್ಲಾ ಜಿಲ್ಲಾ ಕಾರ್ಯದರ್ಶಿಗಳಿಗೆ
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್
ಜಿಲ್ಲಾ ಸಂಸ್ಥೆ, ಕರ್ನಾಟಕ

ಮಾನ್ಯರೆ,

**ವಿಷಯ: ವಿಶೇಷ ಬೇಸಿಗೆ ಶಿಬಿರದ ಅಡಿಯಲ್ಲಿ ರಾಜ್ಯ ಮಟ್ಟದ ಪ್ರಕೃತಿ ಅಧ್ಯಯನ, ಐತಿಹಾಸಿಕ ವಿಶ್ವ ಪ್ರಸಿದ್ಧ ಏಕಶಿಲಾ ಬೆಟ್ಟ ಚಾರಣ ಮತ್ತು ಸಾಹಸ ಕ್ರೀಡಾ ಚಟುವಟಿಕೆ ಶಿಬಿರಕ್ಕೆ ರೋವರ್ಸ್ -ರೇಂಜರ್ಸ್‌ಗಳನ್ನು ನಿಯೋಜಿಸುವ ಬಗ್ಗೆ**

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ಮತ್ತು ಮಧುಗಿರಿ ಜಿಲ್ಲೆಯ ಸಹಯೋಗದೊಂದಿಗೆ ರೋವರ್ಸ್-ರೇಂಜರ್ಸ್‌ಗಳಿಗೆ ವಿಶೇಷ ಬೇಸಿಗೆ ಶಿಬಿರದ ಅಡಿಯಲ್ಲಿ ರಾಜ್ಯ ಮಟ್ಟದ ಪ್ರಕೃತಿ ಅಧ್ಯಯನ, ಐತಿಹಾಸಿಕ ವಿಶ್ವ ಪ್ರಸಿದ್ಧ ಏಕಶಿಲಾ ಬೆಟ್ಟ ಚಾರಣ ಮತ್ತು ಸಾಹಸ ಕ್ರೀಡಾ ಚಟುವಟಿಕೆ ಶಿಬಿರವನ್ನು **ದಿನಾಂಕ 08.04.2026 ರಿಂದ 10.04.2026ರ ವರೆಗೆ** ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣ, ಮಧುಗಿರಿ ಜಿಲ್ಲೆಯಲ್ಲಿ ಆಯೋಜಿಸಲಾಗಿದೆ. ವಿವರಗಳು ಕೆಳಕಂಡಂತಿವೆ.

| | |
|---|---|
| ಶಿಬಿರ | ರೋವರ್ಸ್-ರೇಂಜರ್ಸ್‌ಗಳಿಗೆ ವಿಶೇಷ ಬೇಸಿಗೆ ಶಿಬಿರದ ಅಡಿಯಲ್ಲಿ ರಾಜ್ಯ ಮಟ್ಟದ ಪ್ರಕೃತಿ ಅಧ್ಯಯನ, ಐತಿಹಾಸಿಕ ವಿಶ್ವ ಪ್ರಸಿದ್ಧ ಏಕಶಿಲಾ ಬೆಟ್ಟ ಚಾರಣ ಮತ್ತು ಸಾಹಸ ಕ್ರೀಡಾ ಚಟುವಟಿಕೆ ಶಿಬಿರ |
| ದಿನಾಂಕ | ದಿನಾಂಕ:08.04.2026 ರಿಂದ 10.04.2026ರ ವರೆಗೆ |
| ವರದಿ ಮಾಡುವ ಸ್ಥಳ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣ, ಮಧುಗಿರಿ ಜಿಲ್ಲೆ |
| ಹಾಜರಾಗುವ ವೇಳೆ ಮತ್ತು ದಿನಾಂಕ | ದಿನಾಂಕ:08.04.2026 ರಂದು ಬೆಳಗ್ಗೆ 10.00 ಗಂಟೆಗೆ ಕಡ್ಡಾಯವಾಗಿ ವರದಿ ಸಲ್ಲಿಸುವುದು. (ಶಿಬಿರಕ್ಕೆ ತಡವಾಗಿ ಬರುವಂತಿಲ್ಲ.) |
| ಬಿಡುಗಡೆ ಮಾಡುವ ದಿನಾಂಕ | ದಿನಾಂಕ 10.04.2026 ಮಧ್ಯಾಹ್ನ ಊಟದ ನಂತರ ಬಿಡುಗಡೆ |
| ನೊಂದಣಿ & ಶಿಬಿರ ಶುಲ್ಕ | ತಲಾ ರೂ.600/- |
| ಆನ್‌ಲೈನ್ ನೊಂದಾವಣಿ | ಭಾಗವಹಿಸುವ ರೋವರ್ಸ್-ರೇಂಜರ್ಸ್‌ಗಳು ಈ ಲಿಂಕ್ https://zfrmz.in/X5oiPQp9H4RezJzsfANQ ನಲ್ಲಿ ನೊಂದಾವಣಿ ಮಾಡಿಕೊಳ್ಳುವುದು. |
| ತರಬೇಕಾದ ಸಾಮಾಗ್ರಿಗಳು | ಶಿಬಿರಕ್ಕೆ ಅವಶ್ಯಕವಿರುವ ಉಡುಪು ಮತ್ತು ಸಲಕರಣೆಗಳು. ಸಮವಸ್ತ್ರ, ಬದಲಿ ಉಡುಪು, ತಟ್ಟೆ, ಲೋಟೆ, ಹಗುರ ಹಾಗೂ ಬೆಚ್ಚನೆ ಹಾಸಿಗೆ, ನೂಲಿನ ಹಗ್ಗ, ಬರವಣಿಗೆ ಸಾಮಾಗ್ರಿಗಳು, ವೈಯಕ್ತಿಕ ವಸ್ತುಗಳು, ನೋಟ್ ಪುಸ್ತಕ, ಶಿಬಿರಾಗ್ನಿ ಉಡುಪು, ದೈಹಿಕ ವೈದ್ಯಕೀಯ ಪ್ರಮಾಣ ಪತ್ರ |
| ಪ್ರತಿ ಜಿಲ್ಲೆಗೆ ನಿಗಧಿಪಡಿಸಿರುವ ಕೋಟಾ | ಪ್ರತಿ ಜಿಲ್ಲೆಯಿಂದ ನಿಪುಣ್ ತರಬೇತಿ ಹೊಂದಿದ 2 ರೋವರ್ಸ್ ಮತ್ತು 2 ರೇಂಜರ್ಸ್‌ಗಳನ್ನು ನಿಯೋಜಿಸುವುದು. |
| ಶಿಬಿರದ ವಿಶೇಷತೆಗಳು | ಪ್ರಕೃತಿ ಅಧ್ಯಯನ ಸಿದ್ದನ ಕಟ್ಟೆ ವಿಶ್ವ ಪ್ರಸಿದ್ಧ ಮಧುಗಿರಿ ಏಕಶಿಲಾ ಬೆಟ್ಟ ಚಾರಣ, ಸ್ವಚ್ಛತಾ ಕಾರ್ಯಕ್ರಮ & ಅರಣ್ಯ ಪ್ರದೇಶ ವೀಕ್ಷಣೆ ಮತ್ತು ಮಾಹಿತಿಯನ್ನು ತಿಳಿಸಲಾಗುವುದು. |

| | |
|---|---|
| ಪ್ರಯಾಣ ವೆಚ್ಚ | ಆಯಾ ಕಾಲೇಜಿನ ರೋವರ್ಸ್-ರೇಂಜರ್ಸ್ ನಿಧಿಯಿಂದ ಭರಿಸುವುದು |
| ಊಟ ಮತ್ತು ವಸತಿ ವ್ಯವಸ್ಥೆ | ರಾಜ್ಯ & ಮಧುಗಿರಿ ಜಿಲ್ಲಾ ಸಂಸ್ಥೆಯವರು ವ್ಯವಸ್ಥೆ ಮಾಡಿರುತ್ತಾರೆ |
| ಸಂಪರ್ಕಿಸಬೇಕಾದ ಸಂಖ್ಯೆ | ಶ್ರೀ. ಟಿ. ಕರಿಸಿದ್ದಪ್ಪ, ಎಎಸ್ಒಸಿ, ಮಧುಗಿರಿ – 9845613892<br>ಶ್ರೀ ಎಂ. ಪ್ರಭಾಕರ್ ಭಟ್, ಎಸ್.ಒ.ಸಿ – 9448914540<br>ಶ್ರೀಮತಿ ಮಂಜುಳ. ಸಿ, ಎಸ್.ಒ.ಸಿ – 9482433516 |

ಭಾಗವಹಿಸುವ ರೋವರ್ಸ್-ರೋವರ್ಸ್‌ಗಳ ಶಿಬಿರ ಶುಲ್ಕ ಮತ್ತು ಪ್ರಯಾಣ ಭತ್ಯೆಯನ್ನು ಆಯಾಯ ಕಾಲೇಜಿನ ರೋವರ್ಸ್-ರೇಂಜರ್ಸ್ ನಿಧಿಯಿಂದ ಭರಿಸುವುದು. ಆಸಕ್ತ ರೋವರ್ಸ್-ರೇಂಜರ್ಸ್‌ಗಳನ್ನು ಆಯ್ಕೆ ಮಾಡಿ, ಮೇಲ್ಕಂಡ ಶಿಬಿರಕ್ಕೆ ನಿಯೋಜಿಸಲು ಕೋರಲಾಗಿದೆ. ಭಾಗವಹಿಸುವ ರೋವರ್ಸ್-ರೇಂಜರ್ಸ್‌ಗಳ ವಿವರಗಳನ್ನು ದಿನಾಂಕ 25.03.2026ರ ಒಳಗಾಗಿ ರಾಜ್ಯ ಸಂಸ್ಥೆಗೆ ತಪ್ಪದೇ ಕಳುಹಿಸುವುದು.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

**ರಾಜ್ಯ ಮುಖ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ**

(ಕೆ.ಗಂಗಪ್ಪ ಗೌಡ)
ರಾಜ್ಯ ಕಾರ್ಯದರ್ಶಿ

**ಪ್ರತಿ ಮಾಹಿತಿಗಾಗಿ:**

1. ರಾಜ್ಯ ಜಂಟಿ ಕಾರ್ಯದರ್ಶಿ (ಸ್ಕೌಟ್ಸ್)/(ಗೈಡ್ಸ್)
2. ಜಿಲ್ಲಾ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಮಧುಗಿರಿ ಜಿಲ್ಲೆ
3. ಎ.ಎಸ್.ಒ.ಸಿ/ಡಿಒ/ಡಿಒಸಿ/ಡಿಒಟಿ/ಎಸ್‌ಜಿವಿ/ಎಸ್‌ಜಿಎಗಳು, ಭಾ.ಸ್ಕೌ&ಗೈ, ಇವರುಗಳ ಸೂಕ್ತ ಕ್ರಮಕ್ಕಾಗಿ